**<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.</u>**

**<u>ಸಿಸಿ ನಂ.632/2023</u>**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ,

-ಃಃ ವಿರುದ್ದ ಃಃ-

ಆರೋಪಿ ನಂಃ 1. ಮಲ್ಲಪ್ಪ ತಂದೆ ಖತಲಪ್ಪಾ ಖತಲಪೋರ್
ವಃ 36 ವರ್ಷ, ಉಃ ಕೂಲಿ ಕೆಲಸ

2. ದೇವಪ್ಪಾ ತಂದೆ ಖತಲಪ್ಪಾ ಖತಲಪೋರ್
ವಃ 30 ವರ್ಷ, ಉಃ ಕೂಲಿ ಕೆಲಸ
ಎಲ್ಲರೂ ಸಾಃ ಅಲ್ಲೂರ ಬಿ. ಗ್ರಾಮ
ಹಾವಸ್ತಿ ಡೋಣಗಾಂವ, ತಾಃ ಚಿತ್ತಾಪೂರ
----

**<u>ದೋ ಷಾ ರೋ ಪ ಣೆ</u>**

ನಾನು **ಶ್ರೀ ಬಾಲು**, ಬಿಎ.,ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 21-02-2023 ರಂದು ಮಧ್ಯಾಹ್ನ 03-00 ಗಂಟೆ ಸುಮಾರಿಗೆ ಸೇಡಂ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಬರುವ ಹಂದರಕಿ ಗ್ರಾಮದಲ್ಲಿ ರಾಯಪ್ಪ ಹರಿಜನ ಇವರ ಮನೆಯ ಹತ್ತಿರ ರಸ್ತೆಯಲ್ಲಿ ಚಾಸಾ.1 ಹಾಗೂ ಸಂಗಡಿಗರಾದ ಚಾಸಾ4, 5 ನೇದ್ದವರು ಹಂದರಕಿ ಗ್ರಾಮದಲ್ಲಿ ಚಾಸಾ.1 ನೇದ್ದವರ ಸಬಂಧಿಕರು ಮೃತಪಟ್ಟಿದ್ದರಿಂದ ಶವಸಂಸ್ಕಾರ ಕಾರ್ಯಕ್ರಮಕ್ಕೆ ಬಂದಾಗ ಚಾಸಾ.1 ಹಾಗೂ ಸಂಗಡಿಗರು ಕೂಡಿ ಹೋಟೆಲ್ ಕಡೆಗೆ ಚಹಾ ಕುಡಿಯಲು ಹೋಗುತ್ತಿದ್ದಾಗ ಹಂದರಕಿ ಗ್ರಾಮದ ರಾಯಪ್ಪ ಇವರ ಮನೆಯ ಮುಂದೆ ರಸ್ತೆಯಲ್ಲಿ ಇಲ್ಲಿ ಶವಸಂಸ್ಕಾರ ಕಾರ್ಯಕ್ರಮಕ್ಕೆ ಬಂದಿದ್ದ ಆರೋಪಿ 1, 2 ರವರು ಕೂಡಿ ಬಂದು ರಸ್ತೆಯಲ್ಲಿ ಹೋಗುತ್ತಿದ್ದ ಚಾಸಾ.1 ನೇದ್ದವನಿಗೆ ತಡೆದು ನಿಲ್ಲಿಸಿದ್ದು , ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 341 ಸಂಗಡ 34ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ ಸಮಯ ಮತ್ತು ಸ್ಥಳದಲ್ಲಿ ಆರೋಪಿತರೆಲ್ಲರೂ ಏಕೋದ್ದೇಶವನ್ನು ಈಡೇರಿಸಿಕೊಳ್ಳುವ ಸಲುವಾಗಿ ಬಂದು, ಆರೋಪಿತರು ಚಾಸಾ.1 ನೆದ್ದವರಿಗೆ ತಡೆದು ನಿಲ್ಲಿಸಿ ಅವಾಚ್ಯ ಶಬ್ದಗಳಿಂದ ಬೈಯುತ್ತಾ ಮಗನೆ ನಿನ್ನ ಮಗ ಈ ಹಿಂದೆ ನಮ್ಮ ಅಕ್ಕಳನ್ನು ಎತ್ತಿಕೊಂಡು ಹೋಗಿ ಮದುವೆಯಾಗ್ಯಾನೆ ಈಗ ನಾವು ನಿನಗೆ ಬಿಡುವುದಿಲ್ಲ ಈ ಬರ್‍ರಿ ಎಷ್ಟು ಜನ ಇದ್ದೀರಿ ಅಂತ ಜಗಳ ತೆಗೆದು ಇಬ್ಬರು ಕೂಡಿ ಕುಸ್ತಿಗೆ ಬಿದ್ದು ಕೆಳಗೆ ಹಾಕಿ ಕೈಯಿಂದ ಬೆನ್ನಿಗೆ ಹೊಟ್ಟೆಗೆ ಹೊಡೆಬಡೆ ಮಾಡಿದ್ದು ,

ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. ಕಲಂ 323 ಸಹವಾಚಕ ಕಲಂ 34ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೂರನೆಯದಾಗಿ ಮೇಲೆ ಹೇಳಲಾದ ದಿನ ಸಮಯ ಮತ್ತು ಸ್ಥಳದಲ್ಲಿ ಆರೋಪಿತರೆಲ್ಲರೂ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಬಂದು, ಆರೋಪಿತರು ಚಾಸಾ.01 ನೇದ್ದವನಿಗೆ ತಡೆದು ನಿಲ್ಲಿಸಿ ಬೋಸಡಿ ಮಗನೆ ಅಂತಾ ಅವಾಚ್ಯವಾಗಿ ಬೈದು ಸಾರ್ವಜನಿಕ ಶಾಂತತೆಗೆ ಭಂಗ ಉಂಟು ಮಾಡಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 504 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಬಂದು, ಆರೋಪಿತರು ಹೋಗುವಾಗ ಚಾಸಾ.1 ನೇದ್ದವನಿಗೆ ಬೋಸಡಿ ಮಗನೆ ಇವತ್ತು ಉಳಿದುಕೊಂಡಿದ್ದಿ ಇನ್ನೊಮ್ಮೆ ನಮ್ಮ ಕೈಯಲ್ಲಿ ಸಿಕ್ಕರೆ ನನಗೆ ಹೊಡೆದು ಖಲಾಸ್ ಮಾಡುತ್ತೇವೆ ಅಂತಾ ಜೀವದ ಬೆದರಿಕೆ ಹಾಕಿದ್ದು, ನೀವು ಭಾ.ದಂ.ಸಂ.ಕಲಂ 506 ಸಹವಾಚಕ ಕಲಂ 34ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 22-12-2025 ಪ್ರ.ದ.ನ್ಯಾ.ದಂ. ಸೇಡಂ.

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.632/2023**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ,

-ಃಃ ವಿರುದ್ದ ಃಃ-

ಆರೋಪಿ ನಂಃ 1. ಮಲ್ಲಪ್ಪ ತಂದೆ ಖತಲಪ್ಪಾ ಖತಲಪೋರ್
ವಃ 36 ವರ್ಷ, ಉಃ ಕೂಲಿ ಕೆಲಸ
ಸಾಃ ಅಲ್ಲೂರ ಬಿ. ಗ್ರಾಮ
ಹಾವಸ್ತಿ ಡೋಣಗಾಂವ, ತಾಃ ಚಿತ್ತಾಪೂರ ಹಾಗೂ ಇನ್ನೊಬ್ಬರು

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ- ಆ-1

ಆ-2

ಪ್ರಃ-2) ನಿಮ್ಮ ತಪ್ಪನ್ನು ಒಪ್ಪಿಕೊಳ್ಳುತ್ತಿರೊ ಅಥವಾ ವಿಚಾರಣೆ ನಡೆಯಬೇಕಾ?

ಉಃ- ಆ-1

ಆ-2

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕಃ 22-12-2025 ಪ್ರ.ದ.ನ್ಯಾ.ದಂ. ಸೇಡಂ.